**ಗಂಗಾರಾಮ್ ಬಡೇರಿಯಾ,** ಭಾ.ಆ.ಸೇ
ಸರ್ಕಾರದ ಕಾರ್ಯದರ್ಶಿ (ಪಂ.ರಾ)
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಇಲಾಖೆ.

**ಕರ್ನಾಟಕ ಸರ್ಕಾರ**

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಹಂತ, 3ನೇ ಮಹಡಿ
ಬಹುಮಹಡಿಗಳ ಕಟ್ಟಡ, ಬೆಂಗಳೂರು–1
ದೂ : 080–22384574/22032941
ಫ್ಯಾಕ್ಸ್ : 080–22389520
ಇ–ಮೇಲ್ : secyrdpr@gmail.com
secy-rdpr@Karnataka.gov.in

ಅ.ಸ. ಪತ್ರ ಸಂ. ಗ್ರಾಅಪ 507 ಗ್ರಾಪಂಅ 2013 (ಪಿ1) — ದಿನಾಂಕ 21.05.2014

ಮಾನ್ಯರೆ,

**ವಿಷಯ:** ರಾಜ್ಯದ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಕಚೇರಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ಪದ್ಧತಿಯನ್ನು ಅಳವಡಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂ. ಗ್ರಾಅಪ 507 ಗ್ರಾಪಂಅ 2013, ದಿನಾಂಕ 14.11.2013 ಮತ್ತು 27.01.2014.
2. ಮಾನ್ಯ ಗ್ರಾ.ಅ&ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರ ಟಿಪ್ಪಣಿ ಸಂ. ಗ್ರಾಅಪ ಟಿ/2014–15/427, ದಿನಾಂಕ 05.05.2014.
3. ಸಮಸಂಖ್ಯೆಯ ಸರ್ಕಾರದ ಪತ್ರ ದಿನಾಂಕ 09.05.2014.

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ.

ಉಲ್ಲೇಖಿತ ಸರ್ಕಾರಿ ಸುತ್ತೋಲೆಗಳು ಮತ್ತು ಪತ್ರಗಳಲ್ಲಿ ರಾಜ್ಯದ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಕಚೇರಿಗಳಲ್ಲಿ ಬಯೋ ಮೆಟ್ರಿಕ್ ಹಾಜರಾತಿ ಪದ್ಧತಿಯನ್ನು ಅಳವಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಕೋರಲಾಗಿತ್ತು. ಆದರೆ, ಇದುವರೆವಿಗೂ ರಾಜ್ಯದ ಕೆಲವು ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಕಚೇರಿಗಳಲ್ಲಿ ಬಯೋ ಮೆಟ್ರಿಕ್ ಪದ್ಧತಿಯನ್ನು ಅಳವಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆದುದರಿಂದ, ಬಯೋ ಮೆಟ್ರಿಕ್ ಪದ್ಧತಿ ಅಳವಡಿಸದಿರುವ ಅಧಿಕಾರಿ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಹಾಗೂ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ, ಗ್ರಾಮ ಪಂಚಾಯತಿ ನೌಕರರ ವಿರುದ್ಧ ತಮ್ಮ ಹಂತದಲ್ಲಿಯೇ ಶಿಸ್ತು ಕ್ರಮ ಜರುಗಿಸುವಂತೆ ತಿಳಿಸಿದೆ.

ಮುಂದುವರೆದು, ಬಯೋ ಮೆಟ್ರಿಕ್ ಪದ್ಧತಿಯನ್ನು ಅಳವಡಿಸಿರುವ / ಅಳವಡಿಸಸದಿರುವ ಬಗ್ಗೆ ಈ ಕೆಳಕಂಡ ಅಂಶಗಳಿಗೆ ಸಂಬಂಧಿಸಿದಂತೆ ಸರ್ಕಾರಕ್ಕೆ ವರದಿ ನೀಡುವಂತೆ ಸಹ ತಿಳಿಸಿದೆ.

1. ಬಯೋ ಮೆಟ್ರಿಕ್ ವ್ಯವಸ್ಥೆಯನ್ನು ಅಳವಡಿಸದೇ ಇರುವ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳ ವಿವರ.
2. ಬಯೋ ಮೆಟ್ರಿಕ್ ವ್ಯವಸ್ಥೆಯನ್ನು ಅಳವಡಿಸಿದ್ದರೂ ಸಹ ನೊಂದಣಿ (ರಿಜಿಸ್ಟ್ರೇಷನ್) ಮಾಡಿಸದೇ ಇರುವ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಂ ಪಂಚಾಯತಿಗಳ ವಿವರ.
3. ಸರ್ಕಾರಿ/ಖಾಸಗಿ ಅಂತರ್ಜಾಲ ಸೇವೆ ನೀಡುವ (ಬಿ.ಎಸ್.ಎನ್.ಎಲ್. ಏರ್‌ಟೆಲ್, ಏರ್‌ಸೆಲ್, ವೊಡಾಫೋನ್, ಟಾಟಾ ಡೊಕೊಮಾ, ರಿಲಯನ್ಸ್, ಐಡಿಯ ಮತ್ತಿತರೆ) ಎಲ್ಲ ಸಂಸ್ಥೆಗಳಿದ್ದರೂ ಸಹ ಅಂತರ್ಜಾಲ ವ್ಯವಸ್ಥೆ ಇಲ್ಲದಿರುವ ಗ್ರಾಮ ಪಂಚಾಯತಿಗಳ ವಿವರ.

4. ಈ ರೀತಿ ಅಂತರ್ಜಾಲ ವ್ಯವಸ್ಥೆ ಇಲ್ಲದಿರುವ ಕಡೆ ಯಾವ ರೀತಿ ಪರ್ಯಾಯ ವ್ಯವಸ್ಥೆ ಮಾಡಿಕೊಂಡಿರುವ ಗ್ರಾಮ ಪಂಚಾಯತಿಗಳ ವಿವರ ಮತ್ತು ಇದನ್ನು ಮೇಲುಸ್ತುವಾರಿಯನ್ನು ಮೇಲಾಧಿಕಾರಿಗಳು ಯಾವ ರೀತಿ ಮಾಡುತ್ತಿದ್ದಾರೆ ಎನ್ನುವ ಬಗ್ಗೆ ವಿವರ.

**ಆದರಗಳೊಡನೆ,**

**ತಮ್ಮ ವಿಶ್ವಾಸಿ,**

ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.